ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಜನಸಾಮಾನ್ಯರಿಗೆ ನೀಡುತ್ತಿರುವ ಸವಲತ್ತುಗಳ ಬಗ್ಗೆ

ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-

200 (267) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಂದಾಯ ಇಲಾಖೆ ವತಿಯಿಂದ ನಾಗರಿಕರಿಗೆ/ಜನಸಾಮಾನ್ಯರಿಗೆ ನೀಡುತ್ತಿರುವ ಸವಲತ್ತುಗಳು ಯಾವುವು;

(ಆ) ಈ ಸವಲತ್ತುಗಳಿಗೋಸ್ಕರ ಸರ್ಕಾರ ಮೀಸಲಿಟ್ಟಿರುವ ಹಣ ಎಷ್ಟು; ಕಳೆದ 5 ವರ್ಷಗಳಿಂದ ಮೇಲ್ಕಂಡ ಸವಲತ್ತುಗಳಿಗಾಗಿ ಸರ್ಕಾರ ಖರ್ಚು ಮಾಡಿರುವ ಹಣ ಎಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಈ ಸವಲತ್ತುಗಳನ್ನು ನೀಡುವಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಖ್ಯೆ ಎಷ್ಟು; ಅಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿ/ ನೌಕರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?